ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,
ದೇವರಾಜ ಅರಸ್ ಮಾರ್ಕೆಟ್, ಹಾಸನ. 264825

ವಾರ್ಷಿಕ ಬಡ್ಡಿ ದರದ ವಿವರಗಳು	ಸಾಮಾನ್ಯರಿಗೆ %	ಹಿರಿಯ ನಾಗರಿಕರಿಗೆ %
* 1 ವರ್ಷದಿಂದ 3 ವರ್ಷಗಳವರೆಗೆ	10.5	11
* 181ದಿನಗಳಿಂದ 365 ದಿನಗಳವರೆಗೆ	8	8.5
* 91 ದಿನಗಳಿಂದ 180 ದಿನಗಳವರೆಗೆ	7	7.5
* 31 ದಿನಗಳಿಂದ 90 ದಿನಗಳವರೆಗೆ	6	6.5
* 90 ತಿಂಗಳುಗಳಲ್ಲಿ ಠೇವಣಿ ಮೊತ್ತ ದ್ವಿಗುಣ		

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ

ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ
ವ್ಯವಸ್ಥಾಪಕ ಸಂಪಾದಕ :ಎಸ್.ಎನ್.ಮಂಜುನಾಥದತ್ತ

PREMIER MARKETING
#817/A,Opp: Mallige Residency,Govt.High School Field,Road,Hassan.
Ph:9620621333
9448742971
9844090035
08172-233509
Dr.Aquaguard
RO+UV+TDS Controller Water Purifier & Water Softner

ಇಂಡೋನೇಷ್ಯಾ ಓಪನ್ ಟೈಟಲ್ ಗೆದ್ದ ಶ್ರೀಕಾಂತ್

ಭಾರತದ ಬ್ಯಾಡ್ಮಿಂಟನ್ ಕ್ರೀಡಾಪಟು ಕಿಡಂಬಿ ಶ್ರೀಕಾಂತ್ ಜಪಾನ್‌ನ ಕಝುಮಾಸಾ ಸಕೆ ಅವರನ್ನು ಮಣಿಸಿದ್ದು, ಇಂಡೋನೇಷ್ಯಾ ಓಪನ್ ಸೂಪರ್ ಸಿರೀಸ್ ಪ್ರೀಮಿಯರ್ ಪುರುಷರ ಸಿಂಗಲ್ಸ್ ಟೈಟಲ್‌ನ್ನು ತಮ್ಮದಾಗಿಸಿಕೊಂಡಿದ್ದಾರೆ. ಸುಮಾರು 37 ನಿಮಿಷಗಳ ಹೋರಾಟದಲ್ಲಿ 21-11, 21-19 ಸೆಟ್‌ಗಳ ಅಂತರದಿಂದ ಜಪಾನ್‌ನ ಎದುರಾಳಿಯನ್ನು ಶ್ರೀಕಾಂತ್ ಜಯಿಸಿದ್ದಾರೆ.

ಕೊಹ್ಲಿ ಕಳಪೆ ಪ್ರದರ್ಶನಕ್ಕೆ ಅನುಷ್ಕಾ ಶರ್ಮಾಗೆ ಟ್ರೋಲ್

ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಫೈನಲ್ ಪಂದ್ಯದಲ್ಲಿ ಕಳಪೆ ಪ್ರದರ್ಶನ ನೀಡಿದ ಟೀಂ ಇಂಡಿಯಾ ನಾಯಕ ವಿರಾಟ್ ಕೊಹ್ಲಿ ವಿರುದ್ಧ ಟೀಕಾ ಪ್ರಹಾರಗಳಾಗುತ್ತಿದ್ದಂತೆಯೇ ಇತ್ತ ಟ್ವಿಟರ್‌ನಲ್ಲಿ ಕೊಹ್ಲಿ ಪ್ರೇಯಸಿ, ನಟಿ ಅನುಷ್ಕಾ ಶರ್ಮಾಳನ್ನು ಟ್ರೋಲ್ ಮಾಡಲಾಗಿದೆ. ಅನುಷ್ಕಾಳನ್ನು ಉಗ್ರರು ಸೆರೆ ಹಿಡಿದಿದ್ದಾರೆಯೇ? ಎಂದು ಪ್ರಶ್ನಿಸಿ ಹ್ಯಾಶ್‌ಟ್ಯಾಗ್ ಮೂಲಕ ಕುಹಕವಾಡಲಾಗಿದೆ.

‘ಹಿಂಸೆಗಿಳಿಯಬೇಡಿ; ಮಾತುಕತೆ ನಡೆಸಿ’

ಹಿಂಸೆಗೆ ಇಳಿಯಬೇಡಿ ಎಂದು ಡಾರ್ಜಿಲಿಂಗ್‌ನಲ್ಲಿ ಪ್ರತ್ಯೇಕ ರಾಜ್ಯಕ್ಕೆ ಒತ್ತಾಯಿಸಿ ಪ್ರಕ್ಷುಬ್ಧ ಪರಿಸ್ಥಿತಿ ನಿರ್ಮಿಸಿರುವ ಪ್ರತಿಭಟನಾಕಾರರಿಗೆ ಮನವಿ ಮಾಡಿರುವ ಗೃಹ ಸಚಿವ ರಾಜನಾಥ್ ಸಿಂಗ್ ಅವರು, ಯಾವುದೇ ಸಮಸ್ಯೆ ಬಗೆಹರಿಸಿಕೊಳ್ಳಲು ಮಾತುಕತೆ ನಡೆಸಿ ಎಂದು ಕರೆ ನೀಡಿದ್ದಾರೆ. ಶನಿವಾರ ಡಾರ್ಜಿಲಿಂಗ್‌ನ ಸಿಂಗಮಾರಿ ಪ್ರದೇಶದ ಘರ್ಷಣೆಯಲ್ಲಿ ಒಬ್ಬ ಮೃತಪಟ್ಟು, 35 ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದಾರೆ.

ಜನತಾಮಾಧ್ಯಮ ಬೆಳಗಿನ ದೈನಿಕ JANATHAMADHYAMA KARKAN. RNI 41566. ಸಂಪುಟ : 40 ಸಂಚಿಕೆ :222 ಸೋಮವಾರ ಜೂ.19, 2017 ದೂರವಾಣಿ : 268494 ಪುಟ-4 ರೂ.2-00 NO. HSN-761/ 2015-17

ಮಸ್ತಕಾಭಿಷೇಕದಷ್ಟೇ ಜನಕಲ್ಯಾಣ ಕಾರ್ಯಕ್ರಮಗಳಿಗೂ ಮಹತ್ವ ನೀಡಿ

ಕಿವಿ-ಮೂಗು-ಗಂಟಲು ಉಚಿತ ತಪಾಸಣಾ ಶಿಬಿರದಲ್ಲಿ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ

ಶ್ರವಣಬೆಳಗೊಳ : ಭಗವಾನ್ ಬಾಹುಬಲಿ ಸ್ವಾಮಿಯ ಮಹಾಮಸ್ತಕಾಭಿಷೇಕ ಎಷ್ಟು ಮಹತ್ವವೋ ಜನಕಲ್ಯಾಣ ಕಾರ್ಯಕ್ರಮಗಳೂ ಅಷ್ಟೇ ಮಹತ್ವದ್ದಾಗಿದೆ ಎಂದು ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ತಿಳಿಸಿದರು.

ಮಹಾಮಸ್ತಕಾಭಿಷೇಕ ಮಹೋತ್ಸವ-2018ರ ನಿಮಿತ್ತ ಶ್ರವಣಬೆಳಗೊಳದ ಶ್ರೀ ಧವಲತೀರ್ಥಂನಲ್ಲಿರುವ ಬಾಹುಬಲಿ ಮಕ್ಕಳ ಆಸ್ಪತ್ರೆಯಲ್ಲಿ ಭಾನುವಾರ ಆಯೋಜಿಸಿದ್ದ ಕಿವಿ-ಮೂಗು-ಗಂಟಲು ಉಚಿತ ತಪಾಸಣಾ ಹಾಗೂ ಔಷಧ ವಿತರಣಾ ಕಾರ್ಯಕ್ರಮದ ಪಾವನ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಮನುಷ್ಯ ಸುಖದಿಂದಿರಲು ಹಣದಿಂದ ಸಾಧ್ಯವಿಲ್ಲ. ಉತ್ತಮ ಜೀವನಕ್ಕೆ ಆರೋಗ್ಯ ಅತ್ಯಗತ್ಯವಾಗಿದೆ ಎಂದರು.

ಈ ಮಹಾಮಸ್ತಕಾಭಿಷೇಕದ ಸಂದರ್ಭದಲ್ಲಿ ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗುವಂತಹ ಹಲವಾರು ಜನಕಲ್ಯಾಣ ಯೋಜನೆಗಳನ್ನು ಆಯೋಜಿಸಲಾಗುತ್ತಿದ್ದು, ಈಗಾಗಲೇ ಕೃತಕ ದಂತ ಜೋಡಣಾ ಶಿಬಿರ, ಕೃತಕ ಕಾಲು ಜೋಡಣಾ ಶಿಬಿರ, ಪ್ರತಿನಿತ್ಯ ಆಸ್ಪತ್ರೆಗೆ ಬರುವ ಮಕ್ಕಳಿಗೆ ಹಾಲು ವಿತರಣೆಯಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಶಾಸಕ ಸಿ.ಎನ್.ಬಾಲಕೃಷ್ಣ ಮಾತನಾಡಿ, ಮಹಾಮಸ್ತಕಾಭಿಷೇಕದ ಪ್ರಥಮ ಹಂತದಲ್ಲಿ ಜನಕಲ್ಯಾಣ ಯೋಜನೆಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯವಾದುದು ಎಂದರು.

ವಿಧಾನ ಪರಿಷತ್ ಸದಸ್ಯ ಎಂ.ಎ. ಗೋಪಾಲಸ್ವಾಮಿ ಮಾತನಾಡಿ, ಮಹಾಮಸ್ತಕಾಭಿಷೇಕ ಮಹೋತ್ಸವಕ್ಕೆ ಈಗಾಗಲೇ 40 ಕೋಟಿ ಹಣ ಬಿಡುಗಡೆಯಾಗಿದ್ದು, ಮುಖ್ಯಮಂತ್ರಿಗಳು ಹೆಚ್ಚಿನ ಮುತುವರ್ಜಿ ವಹಿಸಿ ಮಹೋತ್ಸವದ ಯಶಸ್ವಿಗೆ ಶ್ರಮಿಸುತ್ತಿದ್ದಾರೆ. ಆದರೆ ರಸ್ತೆ ಕಾಮಗಾರಿ ವಿಳಂಬವಾಗಿದ್ದು, ಆದಷ್ಟು ಶೀಘ್ರ ಯೋಜನೆಯ ಪ್ರಕ್ರಿಯೆಗಳಿಗೆ ಚಾಲನೆ ನೀಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯ್ತಿ ಸದಸ್ಯೆ ಮಮತಾ ರಮೇಶ್, ತಾಲ್ಲೂಕು ಪಂಚಾಯ್ತಿ ಸದಸ್ಯರಾದ ಮಹಾಲಕ್ಷ್ಮೀ ಶಿವರಾಜ್, ರಂಜಿತ ನಿಂಗೇಗೌಡ, ಗ್ರಾಮ ಪಂಚಾಯ್ತಿ ಅಧ್ಯಕ್ಷರಾದ ಹೇಮಾ ಪ್ರಭಾಕರ್, ಲತಾ ರಾಜಶೇಖರ್, ಶ್ರುತಕೇವಲಿ ಎಜುಕೇಶನ್ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ ಜಿ.ಡಿ.ಪಾರ್ಶ್ವನಾಥ್, ಜನಕಲ್ಯಾಣ ಉಪಸಮಿತಿಯ ಸಹ ಸಂಯೋಜಕ ಸಚಿನ್ ಎಸ್.ಎ.ಜೈನ್ ಮುಂತಾದವರು ಉಪಸ್ಥಿತರಿದ್ದರು.

ಶಿಬಿರದಲ್ಲಿ 175 ಮಂದಿ ಶಿಬಿರಾರ್ಥಿಗಳು ಭಾಗವಹಿಸಿ ಚಿಕಿತ್ಸೆ ಹಾಗೂ ಔಷಧಿ ಪಡೆದರು. ಶ್ರವಣ ದೋಷವಿದ್ದ ನೂರಕ್ಕೂ ಹೆಚ್ಚು ಜನರಿಗೆ ಕೃತಕ ಶ್ರವಣ ವರ್ಧಕವನ್ನು ಅಳವಡಿಸಲಾಯಿತು. ಶಿಬಿರದ ನೇತೃತ್ವವನ್ನು ಬೆಂಗಳೂರಿನ ಡಾ.ಹೆಚ್.ವಿ.ಶ್ರೀಮಂಧರ ಕುಮಾರ್, ಡಾ.ತಿಪ್ಪೆಸ್ವಾಮಿ, ಡಾ.ಶ್ರೀರಂಗ ಡಾಂಗೆ, ಡಾ.ಬಿ.ಡಿ.ಕೃಷ್ಣಪ್ಪ ವಹಿಸಿದ್ದರು.

ಹನ್ನಾಳು ಅಭಿವೃದ್ಧಿ ನನ್ನ ಪ್ರಥಮ ಆದ್ಯತೆ : ಸಚಿವ ಮಂಜು

ರಾಮನಾಥಪುರ : ಹನ್ನಾಳು ಗ್ರಾಮ ನನ್ನ ರಾಜಕೀಯ ಕಾರ್ಯಕ್ಷೇತ್ರವಾಗಿರುವುದರಿಂದ ಇಲ್ಲಿನ ಅಭಿವೃದ್ಧಿಗೆ ಆದ್ಯತೆ ನೀಡುವುದೇ ನನ್ನ ಪ್ರಥಮ ಗುರಿ ಎಂದು ಪಶು ಸಂಗೋಪನೆ, ರೇಷ್ಮೆ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎ.ಮಂಜು ತಿಳಿಸಿದರು.

ಹೋಬಳಿಯ ತಮ್ಮ ಸ್ವಗ್ರಾಮ ಹನ್ನಾಳು ಗ್ರಾಮದಲ್ಲಿ ಭಾನುವಾರ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ನನಗೆ ಅಧಿಕಾರ ಹಾಗೂ ಅವಕಾಶ ಸಿಕ್ಕಿರುವುದರಿಂದ ನನ್ನ ಕ್ಷೇತ್ರ ಹಾಗೂ ಹಾಸನ ಜಿಲ್ಲೆಯನ್ನು ಸಮಗ್ರವಾಗಿ ಅಭಿವೃದ್ಧಿಗೊಳಿಸುವುದೇ ನನ್ನ ಪ್ರಥಮ ಗುರಿ. ಸರ್ಕಾರದ ಸವಲತ್ತುಗಳನ್ನು ಸಾರ್ವಜನಿಕರಿಗೆ ಒದಗಿಸಿಕೊಡುವುದು ನಾವು ಸೇರಿದಂತೆ ಚುನಾಯಿತ ಜನಪ್ರತಿನಿಧಿಗಳ ಜವಾಬ್ದಾರಿ ಎಂದರು.

2013ರ ಮೇ 26ರಂದು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ತನ್ನ ಪ್ರಣಾಳಿಕೆಯಲ್ಲಿ ಘೋಷಿಸಿದ್ದ 165 ಭರವಸೆಗಳ ಪೈಕಿ 125 ಭರವಸೆಗಳನ್ನು ಈಡೇರಿಸಿದೆ. ಇನ್ನೂ ಒಂದು ವರ್ಷ ಆಡಳಿತಕ್ಕೆ ಅವಕಾಶವಿದ್ದು, ಉಳಿದ ಸುಮಾರು 40 ಭರವಸೆಗಳನ್ನು ಈಡೇರಿಸಲಾಗುವುದು ಎಂದರು.

ಹಾಸನದಿಂದ ಅರಕಲಗೂಡು, ರಾಮನಾಥಪುರ, ಪಿರಿಯಾಪಟ್ಟಣದ ನಡುವಿನ 74 ಕಿ.ಮೀ. ದೂರದ ರಾಜ್ಯ ಹೆದ್ದಾರಿ ಅಭಿವೃದ್ಧಿ ಕಾಮಗಾರಿ 223 ಕೋಟಿ ರೂ. ವೆಚ್ಚದಲ್ಲಿ ಈಗಾಗಲೇ ಪ್ರಾರಂಭವಾಗಿದೆ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕಬ್ಬಳಿಗೆರೆ ಬೈರೇಗೌಡ, ದೊಡ್ಡಮಗ್ಗೆ ತಾ.ಪಂ. ಮಾಜಿ ಸದಸ್ಯ ರಾಜೇಗೌಡ, ಜಿಲ್ಲಾ ಪಂಚಾಯಿತಿ ಸದಸ್ಯ ಮಂಥರ್ ಗೌಡ, ಹೋಬಳಿ ಅಧ್ಯಕ್ಷ ಜಿ.ಸಿ.ಮಂಜೇಗೌಡ ಇನ್ನಿತರರು ಇದ್ದರು.

ಜೂಜಾಡುತ್ತಿದ್ದ 17 ಮಂದಿ ಬಂಧನ

ಹಾಸನ : ಜೂಜಾಡುತ್ತಿದ್ದ 17 ಮಂದಿಯನ್ನು ಬಂಧಿಸಿರುವ ಕೊಣನೂರು ಪೊಲೀಸರು ಬಂಧಿತರಿಂದ 20 ಸಾವಿರ ರೂ. ನಗದು ವಶಪಡಿಸಿಕೊಂಡಿದ್ದಾರೆ.



ಖಚಿತ ಮಾಹಿತಿ ಮೇರೆಗೆ ಅರಕಲಗೂಡು ತಾಲ್ಲೂಕಿನ ಕೊಣನೂರು ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಬ್ಯಾಟರಾಯ ಗೌಡ ಮತ್ತು ಸಿಬ್ಬಂದಿ ಕೊಣನೂರಿನ ಕೋಟೆ ಬೀದಿ ಮತ್ತು ಕೊಣನೂರು ಹೋಬಳಿಯ ಕಾರ್ಗಲ್ ಗ್ರಾಮದಲ್ಲಿ ದಾಳಿ ನಡೆಸಿ ಅಂದರ್ ಬಾಹರ್ ಜೂಜಾಡುತ್ತಿದ್ದ 17 ಮಂದಿಯನ್ನು ಬಂಧಿಸಿ 20,000 ರೂ. ನಗದು ವಶಪಡಿಸಿಕೊಂಡಿದ್ದಾರೆ.

ಬಂಧಿತರನ್ನು ಅರಕಲಗೂಡು ತಾಲ್ಲೂಕಿನ ಹೊಡೆನೂರು ಗ್ರಾಮದ ರಾಜೇಗೌಡ (74), ಕಾರ್ಗಲ್ ಗ್ರಾಮದ ರಾಮಪ್ಪ(60), ದ್ಯಾವಯ್ಯ (55), ಸುಬ್ಬಯ್ಯ(60), ಸುರೇಶ (48), ತರಿಗಳಲೆ ಗ್ರಾಮದ ಹನುಮೇಗೌಡ (51), ಜಗದೀಶ್ (52), ಕೃಷ್ಣೇಗೌಡ (65), ಸೋಮವಾರ ಪೇಟೆ ತಾಲ್ಲೂಕಿನ ಸಂಗಯ್ಯನ ಪುರದ ಬೆಳ್ಳಿಯಪ್ಪ (40), ಚಿಕ್ಕಬೊಮ್ಮನ ಹಳ್ಳಿಯ ಕೃಷ್ಣ (45), ಕೊಣನೂರಿನ ನಾಗರಾಜ (40), ಕೊಣನೂರು ಹೊಸ ಬೀದಿಯ ನಾಗರಾಜ (48), ಇಲ್ಲಿನ ಕೋಟೆ ಬೀದಿಯವರಾದ ನಾಗರಾಜ(55), ಸ್ವಾಮಿ (35), ಮೂರ್ತಿ (50), ಸ್ವಾಮಿ (33), ಮಲ್ಲಿರಾಜಪಟ್ಟಣದ ಕೃಷ್ಣೇಗೌಡ (50) ಎಂದು ಗುರುತಿಸಲಾಗಿದೆ.

ಇವರುಗಳ ವಿರುದ್ಧ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

‘ಸಾಮಾಜಿಕ ಕಾಳಜಿ ಇಲ್ಲದ ನಾಯಕರಿಂದ ಪ್ರಗತಿ ಅಸಾಧ್ಯ’

ಮೈಸೂರು :ಸಾಮಾಜಿಕ ಕಾಳಜಿ ಇಲ್ಲದ ನಾಯಕರಿಂದ ಸಮಾಜದ ಪ್ರಗತಿ ಸಾಧ್ಯವಿಲ್ಲ ಎಂದು ಜನತಾಮಾಧ್ಯಮ ಪತ್ರಿಕೆ ಸಂಪಾದಕ ಆರ್.ಪಿ.ವೆಂಕಟೇಶಮೂರ್ತಿ ಅಭಿಪ್ರಾಯಪಟ್ಟರು.

ದೇಶಿರಂಗ ಸಂಸ್ಥೆಯು ಮೈಸೂರಿನ ಕಲಾಮಂದಿರದ ಮನೆಯಂಗಳದಲ್ಲಿ ಭಾನುವಾರ ಆಯೋಜಿಸಿದ್ದ ಪ್ರೊ.ಕೆ.ರಾಮದಾಸ್ ನೆನಪಿನಲ್ಲಿ ಸಂವಾದ, ಪುಸ್ತಕ ಬಿಡುಗಡೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ನಮ್ಮನ್ನು ಆಳುವ ಜನಪ್ರತಿನಿಧಿಗಳಿಗೆ ಸಮಾಜದ ಏಳಿಗೆಯ ಬಗ್ಗೆ ಯಾವುದೇ ಕಳಕಳಿ ಇಲ್ಲ. ಬದಲಿಗೆ ಕೇವಲ ಅವರ ವೈಯಕ್ತಿಕ ಹಾಗೂ ಕುಟುಂಬದ ಉದ್ಧಾರದ ಬಗ್ಗೆ ಮಾತ್ರವೇ ಚಿಂತನೆ ಹೊಂದಿದ್ದಾರೆ. ಇವರಲ್ಲಿನ ಈ ಅಹಂಭಾವದಿಂದ ಸಮಾಜ ಪ್ರಗತಿ ಸಾಧಿಸಲು ಸಾಧ್ಯವಾಗಿಲ್ಲ. ಹೀಗಾಗಿ ನಮ್ಮ ನಾಯಕರು ತಮ್ಮಲ್ಲಿರುವ ಅಹಂ ಬಿಟ್ಟಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ ಎಂದರು.

ಇತ್ತೀಚಿನ ದಿನಗಳಲ್ಲಿ ಜಾಗತೀಕರಣದಿಂದಾಗಿ ದೇಶ ದೇಶಗಳು, ರಾಜ್ಯ-ರಾಜ್ಯಗಳ ನಡುವೆ ಸ್ಪರ್ಧೆ ಏರ್ಪಟ್ಟಿದ್ದು, ಎಲ್ಲೆಡೆಗಳಲ್ಲಿ ಅಭದ್ರತೆ ಕಾಡುತ್ತಿರುವುದು ಆತಂಕದ ಪರಿಸ್ಥಿತಿಯಾಗಿದೆ. ಇದರ ಪರಿಣಾಮ ಸಮಾಜದಲ್ಲಿ ಧರ್ಮ-ಧರ್ಮಗಳ ನಡುವಿನ ಅಂತರ ಹೆಚ್ಚುತ್ತಿದ್ದು, ಈ ಪರಿಸ್ಥಿತಿ ಭಾರತಕ್ಕೆ ಮಾತ್ರ ಸೀಮಿತವಾಗದೆ ಅಮೇರಿಕಾ, ಜಪಾನ್, ಟರ್ಕಿ, ಚೀನಾ ಸೇರಿದಂತೆ ವಿಶ್ವದ ಹಲವು ರಾಷ್ಟ್ರಗಳಲ್ಲೂ ಕಾಣಬಹುದಾಗಿದೆ ಎಂದು ತಿಳಿಸಿದರು.

ರಾಜ್ಯದಲ್ಲಿ ದಲಿತ ಚಳವಳಿ, ರೈತ ಚಳವಳಿ ಸೇರಿದಂತೆ ನಾನಾ ಚಳವಳಿಗಳು ನಡೆದಿವೆ. ಆದರೆ ಈ ಚಳವಳಿಗಳ ನಾಯಕತ್ವವನ್ನು ವಹಿಸುವವರು ತಮ್ಮ ಸ್ವಾರ್ಥ ಸಾಧನೆಗೆ ಯತ್ನಿಸಿದರೇ ವಿನಃ ತಮ್ಮವರ ಬಗ್ಗೆ ಕಾಳಜಿ ವಹಿಸದ ಕಾರಣ ಅನೇಕ ಚಳವಳಿಗಳು ವಿಫಲವಾದವು. ಇನ್ನು ರೈತರ ಸಾಲ ಮನ್ನಾ ಮಾಡಬೇಕೆಂಬ ಬೇಡಿಕೆ ಹೊಸದೇನಲ್ಲ. ಹೀಗಾಗಿ ಸಾಲ ಮನ್ನಾಕ್ಕೆ ಆಗ್ರಹಿಸಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ವಿರುದ್ಧ ರೈತರು ಎಷ್ಟೇ ಹೋರಾಟ ನಡೆಸಿದರೂ ಯಶಸ್ಸು ಸಿಗಲಿದೆ ಎಂಬ ನಂಬಿಕೆ ಇಲ್ಲದಂತಾಗಿದೆ ಎಂದರು.

ಔಟ್‌ಲುಕ್ ಪತ್ರಿಕೆ ಸಂಪಾದಕ ಕೃಷ್ಣ ಪ್ರಸಾದ್ ಮಾತನಾಡಿ, ದೇಶದಲ್ಲಿ ಇಂದು ಕಂಡು ಬರುತ್ತಿರುವ ಪರಿಸ್ಥಿತಿಯನ್ನು ತಮ್ಮ ಜೀವನದಲ್ಲಿ ನೋಡಿರಲಿಲ್ಲ. ದೇಶಕ್ಕೆ ಸ್ವಾತಂತ್ರ ದೊರೆತು 70 ವರ್ಷಗಳೇ ಕಳೆದರೂ ಇಂದಿಗೂ ಅಸಮಾನತೆ ನೆಲೆಸಿದೆ. ಅಲ್ಲದೆ ದೇಶದಲ್ಲಿ ಬಹುಸಂಖ್ಯಾತ- ಅಲ್ಪಸಂಖ್ಯಾತ ಸೇರಿದಂತೆ ಯಾವ ಕ್ಷೇತ್ರದಲ್ಲೂ ಹೊಂದಾಣಿಕೆ ಕಾಣಿಸುತ್ತಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಪತ್ರಿಕೋದ್ಯಮಿ ರಾಜಶೇಖರ ಕೋಟಿ, ಜನವಾದಿ ಮಹಿಳಾ ಸಂಘಟನೆ ರಾಜ್ಯ ಉಪಾಧ್ಯಕ್ಷೆ ಕೆ.ಎಸ್. ವಿಮಲ, ಬಿ.ಎನ್.ಶ್ರೀರಾಮ್ ಇನ್ನಿತರರು ಹಾಜರಿದ್ದರು.

ಪಾಕಿಸ್ತಾನ ಐಸಿಸಿ ಟ್ರೋಫಿ ಚಾಂಪಿಯನ್

ಲಂಡನ್ : ಓವಲ್ ಕ್ರೀಡಾಂಗಣದಲ್ಲಿ ನಡೆದ ಐಸಿಸಿ ಚಾಂಪಿಯನ್ಸ್ ಟ್ರೋಫಿ ಫೈನಲ್ ಪಂದ್ಯದಲ್ಲಿ ಭಾರತ ತಂಡವನ್ನು 180 ರನ್‌ಗಳ ಅಂತರದಲ್ಲಿ ಮಣಿಸಿದ ಪಾಕಿಸ್ತಾನ ತನ್ನ ಚೊಚ್ಚಲ ಐಸಿಸಿ ಚಾಂಪಿಯನ್ಸ್ ಟ್ರೋಫಿಯನ್ನು ಎತ್ತಿ ಹಿಡಿದಿದೆ.

ಪಾಕಿಸ್ತಾನ ನೀಡಿದ್ದ 339 ರನ್‌ಗಳ ಗುರಿ ಬೆನ್ನು ಹತ್ತಿದ ಭಾರತಕ್ಕೆ ಪಾಕ್ ವೇಗಿ ಮಹಮ್ಮದ್ ಆಮಿರ್ ಅಕ್ಷರಶಃ ದುಸ್ವಪ್ನವಾಗಿ ಕಾಡಿದರು. ಆರಂಭದಲ್ಲೇ ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ ಹಾಗೂ ಶಿಖರ್ ಧವನ್ ಔಟ್ ಮಾಡಿದ ಆಮಿರ್ ಭಾರತಕ್ಕೆ ಚೇತರಿಸಿಕೊಳ್ಳಲಾಗದ ಆಘಾತ ನೀಡಿದರು. ಬಳಿಕ ಯುವರಾಜ್ ಸಿಂಗ್ ಕೂಡ ಶದಾಬ್ ಖಾನ್ ಬೌಲಿಂಗ್‌ನಲ್ಲಿ ಎಲ್‌ಬಿ ಬಲೆಗೆ ಬಿದ್ದರು. ಮತ್ತೊಂದು ತುದಿಯಲ್ಲಿದ್ದ ಧೋನಿ ಹಸನ್ ಅಲಿ ಬೌಲಿಂಗ್‌ನಲ್ಲಿ ಔಟ್ ಆಗುವುದರೊಂದಿಗೆ ಭಾರತದ ಗೆಲುವಿನ ಕನಸು ಕಮರಿತು.

ಎಲ್ಲಾ ಸಮುದಾಯದ ವಿದ್ಯಾರ್ಥಿಗಳಿಗೂ ಬಸ್ ಪಾಸ್ ವಿತರಿಸಲಿ : ಮುತಾಲಿಕ್

ಹಾಸನ : ಕೇವಲ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಮಾತ್ರ ಉಚಿತ ಬಸ್ ಪಾಸ್ ವಿತರಿಸುತ್ತಿರುವ ರಾಜ್ಯ ಸರ್ಕಾರ, ಆ ಸೌಲಭ್ಯವನ್ನು ಎಲ್ಲಾ ಸಮುದಾಯದ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ವಿದ್ಯಾರ್ಥಿಗಳಿಗೂ ವಿಸ್ತರಿಸಲಿ ಎಂದು ಶ್ರೀರಾಮ ಸೇನೆ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಆಗ್ರಹಿಸಿದರು.

ನಗರದ ಸಂಸ್ಕೃತ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಕೇವಲ ಎಸ್ಸಿ, ಎಸ್ಟಿ ಶಾಲಾ ವಿದ್ಯಾರ್ಥಿಗಳಿಗೆ ಮಾತ್ರ ಉಚಿತ ಬಸ್ ಪಾಸ್ ವಿತರಿಸುತ್ತಿದೆ. ಈ ಮೂಲಕ ಇತರೆ ವರ್ಗದ ಮಕ್ಕಳ ಮನಸ್ಸಿನ ಮೇಲೆ ಸರ್ಕಾರವೇ ತಾರತಮ್ಯ ಭಾವನೆ ಬಿತ್ತುತ್ತಿದೆ. ಅಹಿಂದ ವರ್ಗದ ನಾಯಕರಾಗಿ ಎಲ್ಲಾ ವರ್ಗಗಳಿಗೆ ಏಕೆ ಸಮಾನ ಅವಕಾಶ ನೀಡುತ್ತಿಲ್ಲ? ಹಿಂದುಳಿದ ವರ್ಗಗಳಿಗೆ ಸವಲತ್ತು ನೀಡಲು ನಮಗೆ ಯಾವುದೇ ಅಭ್ಯಂತರ ಅಥವಾ ವಿರೋಧವಿಲ್ಲ. ಆದರೆ ಶಾಲಾ ಹಂತದಿಂದಲೇ ಮಕ್ಕಳಿಗೆ ಅಸಮಾನತೆ ಮೂಡಿಸುವುದು ಸರಿಯಲ್ಲ. ಈ ಸಂಬಂಧ ಶ್ರೀರಾಮ ಸೇನೆ ಪದಾಧಿಕಾರಿಗಳು ರಾಜ್ಯ ಗೃಹ ಸಚಿವರಿಗೆ ಮನವಿ ಸಲ್ಲಿಸಲಿದ್ದಾರೆ ಎಂದರು.

ಇತ್ತೀಚೆಗೆ ಬಾಲಿವುಡ್ ಚಿತ್ರನಟ ಸಲ್ಮಾನ್ ಖಾನ್ ದೇಶದ ಯುದ್ಧ ಪ್ರೇಮಿಗಳಿಗೆ ಬಂದೂಕು ಮತ್ತು ಆಯುಧ ಕೊಟ್ಟು ಪಾಕಿಸ್ತಾನ ಗಡಿಯತ್ತ ಕಳುಹಿಸಿ ಎಂಬ ಪ್ರಚೋದನಕಾರಿ ಹೇಳಿಕೆ ನೀಡಿದ್ದಾರೆ. ತಮ್ಮ ಸ್ವಾರ್ಥ ಸಾಧನೆಗೆ ಮತ್ತು ಚಲನಚಿತ್ರ ಪ್ರದರ್ಶನ ಉದ್ದೇಶದಿಂದ ಇಂತಹ ಲಜ್ಜೆಗೇಡಿತನದ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು. ದೇಶಕ್ಕೆ ಸ್ವಾತಂತ್ರ್ಯ ಬಂದು 7 ದಶಕಗಳು ಕಳೆದಿವೆ. ಭಾರತ ಹಾಗೂ ಪಾಕಿಸ್ತಾನ ನಡುವೆ ಇದುವರೆಗೆ 42 ಬಾರಿ ಮಾತುಕತೆ ನಡೆಸಿದ್ದರೂ, ಇದುವರೆಗೂ ಯಾವುದೇ ಪ್ರಯೋಜನವಾಗಿಲ್ಲ. ಸಲ್ಮಾನ್ ಖಾನ್ ಬಂದೂಕುಗಳನ್ನು ಕೊಡುವುದೇ ಆದಲ್ಲಿ ಶ್ರೀರಾಮ ಸೇನೆಯ 5 ಸಾವಿರ ಕಾರ್ಯಕರ್ತರು ಪಾಕಿಸ್ತಾನದ ಗಡಿಯತ್ತ ಧಾವಿಸಲು ಸಿದ್ಧ ಎಂದು ಸವಾಲು ಹಾಕಿದರು.

ನಗರದ ಸಂಸ್ಕೃತ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ರಮೋದ್ ಮುತಾಲಿಕ್.

ದೇಶದ ಜಮ್ಮು ಕಾಶ್ಮೀರದಲ್ಲಿ ಪ್ರತ್ಯೇಕವಾದಿಗಳು ಪೆಟ್ರೋಲ್ ಬಾಂಬ್ ಎಸೆಯುವುದು, ಚಿಕ್ಕ ವಯಸ್ಸಿನವರು ಸೈನಿಕರ ಮೇಲೆ ನಡೆಸುತ್ತಿರುವ ಹಲ್ಲೆಗಳು ನೋವುಂಟು ಮಾಡಿವೆ. ಸೈನಿಕರ ಮೇಲೆ ಕಲ್ಲು ತೂರುತ್ತಿರುವ ಕಾಶ್ಮೀರದ ಮುಸಲ್ಮಾನರು ದೇಶದ್ರೋಹಿಗಳು. ಭಯೋತ್ಪಾದಕರು ಹತರಾದರೆ ಅವರಿಗೆ ಜಿಂದಾಬಾದ್ ಹೇಳುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಕೇಂದ್ರ ಸರ್ಕಾರ ನಮ್ಮ ಸೈನಿಕರಿಗೆ ನೈತಿಕ ಬೆಂಬಲ ಮತ್ತು ಆತ್ಮವಿಶ್ವಾಸ ನೀಡಬೇಕು. ಈ ನಿಟ್ಟಿನಲ್ಲಿ ಶ್ರೀರಾಮ ಸೇನೆಯಿಂದ ಜುಲೈ 3ರಂದು ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಬೆಳಿಗ್ಗೆ 11 ರಿಂದ 12 ಗಂಟೆಗೆ ಯೋಧರಿಗೆ ನಮ್ಮ ಬೆಂಬಲ ಕಾರ್ಯಕ್ರಮ ಹಮ್ಮಿಕೊಂಡಿದ್ದು, ನಿವೃತ್ತ ಸೈನಿಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲಾಗಿದೆ ಎಂದು ಹೇಳಿದರು.

ಗೋವುಗಳು ಆದಾಯದ ಮೂಲ ಮಾತ್ರವಾಗಿರದೆ, ಭಾವನಾತ್ಮಕ ಸಂಬಂಧ ಹೊಂದಿವೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಕೇವಲ ಅಲ್ಪಸಂಖ್ಯಾತರ ಮತಗಳನ್ನು ಪಡೆಯುವ ದುರುದ್ದೇಶದಿಂದ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಗೋ ಸಂಪತ್ತು ರಕ್ಷಿಸದ ಸರ್ಕಾರದಿಂದ ಪ್ರಗತಿ ಅಸಾಧ್ಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಶ್ರೀರಾಮ ಸೇನೆಯ ರಾಜ್ಯ ವಕ್ತಾರರಾಗಿ ಎಂ.ಎಸ್.ಹರೀಶ ಹಾಗೂ ರಾಜ್ಯ ಕಾರ್ಯದರ್ಶಿಯಾಗಿ ಶಿವಕುಮಾರ್ ಅವರನ್ನು ಆಯ್ಕೆ ಮಾಡಲಾಯಿತು.

ಶ್ರೀರಾಮಸೇನೆ ರಾಜ್ಯ ಘಟಕದ ಕಾರ್ಯದರ್ಶಿ ಕುಲಕರ್ಣಿ, ದಕ್ಷಿಣ ಪ್ರಾಂತ ಅಧ್ಯಕ್ಷ ಮಹೇಶ ಕೊಪ್ಪ, ಪ್ರಾಂತ್ಯ ಅಧ್ಯಕ್ಷ ಪ್ರವೀಣ ವಾಲ್ಕೆ, ಜಿಲ್ಲಾ ಘಟಕದ ಅಧ್ಯಕ್ಷ ಜಾನೆಕೆರೆ ಹೇಮಂತ್ ಇದ್ದರು.

ಕಿನ್ನರಹಳ್ಳಿ ಕಲ್ಯಾಣಿ ಹೂಳು ತೆಗೆದು ಪುನಶ್ಚೇತನ

ಗ್ರಾಮಸ್ಥರೊಂದಿಗೆ ಹಸಿರು ಭೂಮಿ ಪ್ರತಿಷ್ಠಾನದಿಂದ ಶ್ರಮದಾನ

ಹೊಳೆನರಸೀಪುರ : ತಾಲ್ಲೂಕಿನ ಕಿನ್ನರಹಳ್ಳಿ ಗ್ರಾಮದಲ್ಲಿರುವ 150 ವರ್ಷಗಳಿಗಿಂತ ಹೆಚ್ಚು ಹಳೆಯದಾದ ಕಲ್ಯಾಣಿಯನ್ನು ಉಪವಿಭಾಗಾಧಿಕಾರಿ ಡಾ.ಹೆಚ್.ಎಲ್. ನಾಗರಾಜ್ ನೇತೃತ್ವದಲ್ಲಿ ಹೂಳು ತೆಗೆಸಿ ಪುನಶ್ಚೇತನಗೊಳಿಸಲಾಯಿತು.

ಹಸಿರು ಭೂಮಿ ಪ್ರತಿಷ್ಠಾನ ಆಯೋಜಿಸಿದ್ದ ಶ್ರಮದಾನದ ಹಿನ್ನೆಲೆಯಲ್ಲಿ ಗ್ರಾಮಕ್ಕೆ ಭೇಟಿ ನೀಡಿದ್ದ ಉಪವಿಭಾಗಾಧಿಕಾರಿ ಡಾ. ಹೆಚ್.ಎಲ್.ನಾಗರಾಜ್ ಅವರು, ಈ ಗ್ರಾಮದ ಕಲ್ಯಾಣಿಯನ್ನು ಸ್ವಚ್ಛಗೊಳಿಸುವುದರಿಂದ ನೀರು ತುಂಬುವ ಸಂಭವವಿದೆ. ಈ ಕಲ್ಯಾಣಿ ಗ್ರಾಮದ ಉಪಯೋಗಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಹಾಸನ ಜಿಲ್ಲಾ ಹಸಿರು ಭೂಮಿ ಪ್ರತಿಷ್ಠಾನದ ಅಧ್ಯಕ್ಷ ಆರ್.ಪಿ.ವೆಂಕಟೇಶಮೂರ್ತಿ ಮಾತನಾಡಿ, ಸ್ವಚ್ಛತೆ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ಹಮ್ಮಿಕೊಂಡು ಪುರಾತನ ಕಾಲದಿಂದ ಕೆರೆ ಕಟ್ಟೆಗಳು, ಕಲ್ಯಾಣಿ ಹೂಳು ತುಂಬಿಕೊಂಡು ಕಣ್ಮರೆಯಾಗಿರುತ್ತವೆ. ಅವುಗಳನ್ನು ಗುರುತಿಸಿ ಹಸಿರು ಭೂಮಿ ಪ್ರತಿಷ್ಠಾನದ ವತಿಯಿಂದ ಬೆಳಕಿಗೆ ತರಲು ಮುಂದಾಗುವುದಾಗಿ ತಿಳಿಸಿದರು.

ಶ್ರಮದಾನದಲ್ಲಿ ಹಸಿರು ಭೂಮಿ ಪ್ರತಿಷ್ಠಾನದ ರಾಜೀವೇಗೌಡ, ರಾಜಸ್ವ ನಿರೀಕ್ಷಕ ಶಿವಕುಮಾರ್, ಗಣೇಶ್, ಪೃಥ್ವಿ, ಸಮಾಜ ಸೇವಕಿ ರಾಣಿ, ತಿಮ್ಮೇಶ್, ಸ್ಕೌಟ್ ಅಂಡ್ ಗೈಡ್ಸ್‌ನ ಕಾಂಚನಮಾಲಾ ಮತ್ತಿತರರಿದ್ದರು.

‘ನಿತ್ಯ ಯೋಗಾಭ್ಯಾಸ ಆತ್ಮವಿಶ್ವಾಸ ವೃದ್ಧಿಗೆ ಕಾರಣ’

ಹಾಸನ : ಪ್ರತಿನಿತ್ಯ ಸ್ವಲ್ಪ ಸಮಯ ಯೋಗಾಭ್ಯಾಸ ಮಾಡುವುದರಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಜತೆಗೆ ಆತ್ಮವಿಶ್ವಾಸ ಹೆಚ್ಚಿಸಿಕೊಳ್ಳಬಹುದು ಎಂದು ಶಾಸಕ ಎಚ್.ಎಸ್.ಪ್ರಕಾಶ್ ಸಲಹೆ ನೀಡಿದರು.

ವಿಶ್ವ ಯೋಗ ದಿನಾಚರಣೆ ಅಂಗವಾಗಿ ಭಾನುವಾರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಭಾರತ ಸರ್ಕಾರ, ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, ಜಿಲ್ಲಾಡಳಿತ ಹಾಗೂ ಪತಂಜಲಿ ಯೋಗ ಸಮಿತಿ ಆಶ್ರಯದಲ್ಲಿ ನಗರದಲ್ಲಿ ನಡೆದ ಯೋಗ ನಡಿಗೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನ ಒತ್ತಡದ ಬದುಕಿನಲ್ಲಿ ಒಂದಷ್ಟು ಸಮಯವನ್ನು ಯೋಗಾಭ್ಯಾಸಕ್ಕೆ ಮೀಸಲಿಡಬೇಕು. ಯೋಗಾಸನ ಮಾಡುವುದರಿಂದ ನೆಮ್ಮದಿ ಕಂಡುಕೊಳ್ಳಬಹುದು. ಪೋಷಕರು ಮಕ್ಕಳಿಗೆ ಯೋಗಾಭ್ಯಾಸ ಕಲಿಕೆಗೆ ಪ್ರೋತ್ಸಾಹ ನೀಡಬೇಕು. ಭೂಮಿ ಮೇಲೆ ಎಲ್ಲಾ ರೀತಿಯ ಔಷಧಿಗಳಿದ್ದರೂ, ಉತ್ತಮ ಆರೋಗ್ಯ ಪಡೆಯಲು ಆಗುತ್ತಿಲ್ಲ. ಪೂರ್ವಜರು ಆಸ್ಪತ್ರೆಗಳಿಗೆ ಹೋಗುತ್ತಿದ್ದ ಪ್ರಸಂಗ ಕಡಿಮೆ ಎಂದರು.

ಪತಂಜಲಿ ಯೋಗ ಸಮಿತಿಯ ಜಿಲ್ಲಾ ಪ್ರಭಾರಿ ಹರಿಹರಪುರ ಶ್ರೀಧರ್ ಮಾತನಾಡಿ, ಯೋಗ ನಮ್ಮ ಆರೋಗ್ಯ ಸುಧಾರಿಸುವುದಲ್ಲದೆ, ಮನಸ್ಸಿನ ಆರೋಗ್ಯವನ್ನು ವೃದ್ಧಿಸುತ್ತದೆ. ದೇಶದಲ್ಲಿ ಶಾಂತಿ ನೆಲೆಸಿ ಸಮಾಜದಲ್ಲಿ ಉತ್ತಮ ವಾತಾವರಣ ನಿರ್ಮಿಸಬಹುದು. ಅಂತರರಾಷ್ಟ್ರೀಯ ಮಟ್ಟದಲ್ಲಿ ಜೂನ್ 21ರಂದು ವಿಶ್ವ ಯೋಗ ದಿನಾಚರಣೆ ಆಚರಿಸಲಾಗುತ್ತಿದೆ. ಇಂದು ಹಲವು ದೇಶಗಳಲ್ಲಿ ಯೋಗ ಪ್ರಬಲವಾಗಿ ಬೆಳೆದಿದೆ ಎಂದು ಹೇಳಿದರು.

ಯೋಗ ನಡಿಗೆಯಲ್ಲಿ (ಯೋಗಥಾನ್) ಸಾರ್ವಜನಿಕರು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಪತಂಜಲಿ ಯೋಗ ಶಿಬಿರಾರ್ಥಿಗಳು, ವಿವಿಧ ಸಂಘ-ಸಂಸ್ಥೆಗಳು ಭಾಗವಹಿಸಿದ್ದವು. ನಗರದ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಯಿತು.

ಸಾಲ ಬಾಧೆ : ರೈತ ಆತ್ಮಹತ್ಯೆ

ಹಾಸನ : ತಾಲ್ಲೂಕಿನ ರೈತನೊಬ್ಬ ಸಾಲದ ಬಾಧೆಗೆ ಹೆದರಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ಭಾನುವಾರ ವರದಿಯಾಗಿದೆ.

ತಾಲ್ಲೂಕಿನ ಚಾಕನಹಳ್ಳಿ ಗ್ರಾಮದ ಗೋವಿಂದೇಗೌಡ (50) ಎಂಬಾತನೇ ಆತ್ಮಹತ್ಯೆಗೆ ಶರಣಾಗಿರುವ ರೈತ. ಈತ ಬ್ಯಾಂಕುಗಳಲ್ಲಿ ಮತ್ತು ಇನ್ನಿತರೆಡೆ ಕೈ ಸಾಲ ಮಾಡಿಕೊಂಡಿದ್ದು, ಸಾಲ ತೀರಿಸಲಾಗದೆ ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಬರದ ಬೇಗೆಯಿಂದಾಗಿ ಭೂಮಿಗೆ ಮಳೆ ಬೀಳದೆ ಬಿತ್ತನೆ ಮಾಡಿದ ಎಲ್ಲಾ ಪೈರುಗಳು ಒಣಗಿ ಹೋಗಿ ಯಾವುದೇ ಪ್ರತಿಫಲ ಸಿಗದೆ ಕಂಗಾಲಾಗಿ ಹೋಗಿದ್ದ ರೈತ ಮನನೊಂದು ಆತ್ಮಹತ್ಯೆಯ ಹಾದಿ ತುಳಿದಿದ್ದಾನೆ.

ಈ ಬಗ್ಗೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

‘ಅರಣ್ಯ ನಾಶ ಮುಂದುವರೆದಲ್ಲಿ ಕೃತಕ ಗಾಳಿಯೇ ಅನಿವಾರ್ಯ’

ವಿದ್ಯಾನಗರದಲ್ಲಿ ಸಾವಿರ ಗಿಡ ನೆಟ್ಟ ವಿದ್ಯಾರ್ಥಿಗಳು, ಸಂಘ ಸಂಸ್ಥೆಗಳು, ಪರಿಸರಪ್ರೇಮಿಗಳು

ಹಾಸನ: ಅಭಿವೃದ್ಧಿ ಹೆಸರಲ್ಲಿ ಅರಣ್ಯ ನಾಶ ಮುಂದುವರೆದರೆ ಮುಂದೊಂದು ದಿನ ಉಸಿರಾಟಕ್ಕೆ ಕೃತಕ ಗಾಳಿ ಬಳಸಬೇಕಾಗುತ್ತದೆ ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಮೋಹನ್ ಕುಮಾರ್ ಆತಂಕ ವ್ಯಕ್ತಪಡಿಸಿದರು.

ನಗರದ ವಿದ್ಯಾನಗರದಲ್ಲಿ ಭಾನುವಾರ ಬೃಹತ್ ಸ್ವಚ್ಛತಾ ಆಂದೋಲನ ಹಾಗೂ ಸಾವಿರ ಗಿಡ ನೆಡುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ಪರಿಸರ ಸಂರಕ್ಷಣೆ ಬಗ್ಗೆ ಇಂದಿನಿಂದಲೇ ಅರಿವು ಮೂಡಿಸಬೇಕು. ಹಿಂದೆ ಪೂರ್ವಿಕರು ರಸ್ತೆಬದಿ ಗಿಡ ನೆಟ್ಟು ಉತ್ತಮ ಪರಿಸರ ನಿರ್ಮಿಸಿದ್ದರು. ಇಂದು ಅಭಿವೃದ್ಧಿಯ ಭರದಲ್ಲಿ ಮನುಷ್ಯ ಪರಿಸರ ನಾಶ ಮಾಡುತ್ತಿದ್ದಾನೆ.

ಮತ್ತೊಂದೆಡೆ ಪ್ಲಾಸ್ಟಿಕ್ ಬಳಸದಂತೆ ಹೇಳುತ್ತಿದ್ದರೂ ಬಳಕೆ ನಿಲ್ಲಿಸಲು ಆಗಿಲ್ಲ. ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣಕ್ಕೆ ಎಲ್ಲಾ ನಾಗರಿಕರ ಸಹಕಾರ ಅತ್ಯಗತ್ಯ ಎಂದು ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಸದಸ್ಯ ಕೆ.ಎಚ್. ಪರಮೇಶ್ ಮಾತನಾಡಿ, ಮನೆಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಮೂಲದಲ್ಲೇ ಹಸಿ ಮತ್ತು ಒಣ ಕಸವೆಂದು ವಿಂಗಡಿಸಬೇಕು. ಹಣ್ಣು ಹಾಗೂ ಹಸಿರು ತರಕಾರಿ ತ್ಯಾಜ್ಯವನ್ನು ಗಿಡಗಳಿಗೆ ಹಾಕಬೇಕು. ಅತಿಯಾದ ಪ್ಲಾಸ್ಟಿಕ್ ಬಳಕೆ ಪರಿಸರ ಹಾಗೂ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಪರಿಸರ ಸಂರಕ್ಷಣೆಗೆ ಕುರಿತು ಇಂದಿನಿಂದಲೇ ಜಾಗೃತಿ ಮೂಡಿಸಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಸ್ವಚ್ಛತಾ ಆಂದೋಲನ ಹಾಗೂ ಗಿಡ ನೆಡುವ ಕಾರ್ಯಕ್ರಮದಲ್ಲಿ ಸ್ಕೌಟ್ ಅಂಡ್ ಗೈಡ್ಸ್‌ನ ವಿದ್ಯಾರ್ಥಿಗಳು, ಸ್ಕೌಟ್ಸ್ ಅಂಡ್ ಗೈಡ್ಸ್‌ನ ಕಾಂಚನಾ, ನಾಯಕ ಗಿರೀಶ್, ಮಾನವ ಹಕ್ಕುಗಳ ಒಕ್ಕೂಟದ ಅಧ್ಯಕ್ಷ ಜಿ.ಎಂ.ದಯಾನಂದ, ಮೈಸೂರಿನ ರಾಮಕೃಷ್ಣ ಆಶ್ರಮದ ಸ್ವರೂಪಾನಂದಜೀ ಮಹಾರಾಜ್, ಪತ್ರಕರ್ತ ವೇಣುಕುಮಾರ್ ಹಾಗೂ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು.